ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

**ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ನೋಂದಣಿ/01/2017-18** **ದಿನಾಂಕ 20/12/2017**

– ಸುತ್ತೋಲೆ –

ವಿಷಯ : ಏಪ್ರಿಲ್-2018 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಎಸ್.ಎ.ಟಿ.ಎಸ್ ಜಾಲತಾಣದಲ್ಲಿ ಅಪ್‌ಲೋಡ್ ಮಾಡುವ ದಿನಾಂಕವನ್ನು ವಿಸ್ತರಿಸುತ್ತಿರುವ ಬಗ್ಗೆ.

ಉಲ್ಲೇಖ : 1) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅನುಮೋದನೆ ದಿನಾಂಕ 13/11/2017

2) ದಿನಾಂಕ 15/11/2017 ರಂದು ರಾಜ್ಯ ಯೋಜನಾ ಕಛೇರಿಯ ಸಭೆಯ ನಡಾವಳಿ

2) ಈ ಕಛೇರಿಯ ಅಧಿಸೂಚನೆ ಸಂ. ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2018/2017-18 ದಿನಾಂಕ 08/08/2017 ಹಾಗೂ ಸುತ್ತೋಲೆ ದಿನಾಂಕ 16/11/2017 ಮತ್ತು 06/12/2017

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಮಾರ್ಚ್-2018 ವಿದ್ಯಾರ್ಥಿಗಳ ನೋಂದಣಿ ಕಾರ್ಯವನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಆದೇಶಿಸಿ ದಿನಾಂಕ 20/12/2017 ರವರೆಗೆ ಅವಧಿಯನ್ನು ವಿಸ್ತರಿಸಿ ನಿಗಧಿಪಡಿಲಾಗಿತ್ತು. ಆನ್‌ಲೈನ್ ನೋಂದಣಿ ಕಾರ್ಯದ ಅವಧಿಯನ್ನು ಮರು ವಿಸ್ತರಿಸುವಂತೆ ಕೋರಿ ಮಂಡಳಿಗೆ ಮನವಿಗಳು ಸ್ವೀಕೃತವಾಗಿರುವುದರಿಂದ ಈ ಅವಧಿಯನ್ನು 28 ಡಿಸೆಂಬರ್ 2017 ರ ವರೆಗೆ ವಿಸ್ತರಿಸಲಾಗಿದೆ.

ಕೆಲವು ಶಾಲೆಗಳು ಎರಡು ಮಂಡಳಿಯ ಕೋಡ್‌ಗಳನ್ನು ಹೊಂದಿದ್ದು ಆನ್‌ಲೈನ್ ನೋಂದಣಿ ಕಾರ್ಯದ ಪ್ರಕ್ರಿಯೆಯಲ್ಲಿ ಕೇವಲ ಒಂದು ಕೋಡ್ ಮಾತ್ರ ಬಳಸಲು ಅವಕಾಶವಿರುವುದರಿಂದ ಆನ್‌ಲೈನ್‌ನಲ್ಲಿ ಲಭ್ಯವಿರುವ ಕೋಡ್‌ನಲ್ಲಿ ಶಾಲೆಯ ಎಲ್ಲಾ ಮಾಧ್ಯಮಗಳ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು ಸೂಚಿಸಿದೆ. ವಿದ್ಯಾರ್ಥಿಗಳ ಮಾಧ್ಯಮವನ್ನು ಚೆಕ್‌ಲಿಸ್ಟ್‌ನಲ್ಲಿ ಪರಿಶೀಲಿಸಿ ಧೃಡಪಡಿಸಿಕೊಳ್ಳುವುದು.

(ಸುಮಂಗಲ. ವಿ) 20/12

ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ

ಪ್ರತಿಗಳನ್ನು

2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗು ಪ್ರೌಢಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಅಭಿಯಾನ, ಬೆಂಗಳೂರು
5. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
6. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ
7. ನಿರ್ದೇಶಕರು, ಪ್ರೌಢಶಿಕ್ಷಣ, ಮಾನ್ಯ ಆಯುಕ್ತರ ಕಛೇರಿ.
8. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ ಹಾಗು ಕಲಬುರ್ಗಿ ವಿಭಾಗಗಳು

ಇವರುಗಳಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.